ಬೆಳಗಾಂ ತಾಲ್ಲೂಕಿನಲ್ಲಿ ಮಂಡಲ ಪಂಚಾಯತಿ ವ್ಯಾಪ್ತಿಯಲ್ಲಿ ಕಟ್ಟಿರುವ ಮನೆಗಳಿಗೆ ವಿದ್ಯುತ್ ಸಂಪರ್ಕ

370 (597): ಶ್ರೀ ಬಿ.ಐ. ಪಾಟೀಲ್ (ಉಚ್ಚಗಾಂವ್):–

ಮಾನ್ಯ ಉಪಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮಂಡಳ ಪಂಚಾಯತಿ ವ್ಯಾಪ್ತಿಯೊಳಗೆ ಕಟ್ಟಿರುವ ಮನೆಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಬೆಳಗಾಂ ಅಭಿವೃದ್ಧಿ ಪ್ರಾಧಿಕಾರದಿಂದ ಎನ್.ಒ.ಸಿ. ಪಡೆಯುವ ಅವಶ್ಯಕತೆ ಇದೆಯೇ ?

ಆ) ಬೆಳಗಾಂ ತಾಲ್ಲೂಕಿನಲ್ಲಿ ಮಂಡಲ ಪಂಚಾಯತಿ ವ್ಯಾಪ್ತಿಯಲ್ಲಿ ಕಟ್ಟಿರುವ ಮನೆಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಆಕ್ಷೇಪಣಾರಹಿತ ಪತ್ರ ಸಲ್ಲಿಸುವ ಬಗ್ಗೆ, ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ಅಧಿಕಾರಿಗಳಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಸರ್ಕಾರವು ಇದರ ಬಗ್ಗೆ ಸ್ಪಷ್ಟ ಹೇಳಿಕೆ ನೀಡುವುದೇ ?

ಶ್ರೀ ಎಸ್. ಎಂ. ಕೃಷ್ಣ (ಉಪಮುಖ್ಯಮಂತ್ರಿಗಳು):–

ಅ) ರಾಜ್ಯ ಸರ್ಕಾರದ ಮಾರ್ಗ ಸೂಚಿಯ ಪ್ರಕಾರ ಬಹು ವ್ಯಾಪಕ ಅಭಿವೃದ್ಧಿ ಯೋಜನೆಯೊಳಗೆ (ಪಿ.ಡಿ.ಪಿ.) ಬರುವ ಬೆಳಗಾಂ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಹಳ್ಳಿಗಳಲ್ಲಿ ಕಟ್ಟಿರುವ ಮನೆಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಬೆಳಗಾಂ ಅಭಿವೃದ್ಧಿ ಪ್ರಾಧಿಕಾರದಿಂದ ಆಕ್ಷೇಪಣಾರಹಿತ ಪತ್ರ ಪಡೆಯುವ ಅವಶ್ಯಕತೆಯಿದೆ.

ಆ) ರಾಜ್ಯ ಸರ್ಕಾರದ ಸುತ್ತೋಲೆ ಕ್ರಮ ಸಂಖ್ಯೆ: ಹೆಚ್.ಯು.ಡಿ. 71 ಎಂ.ಎನ್.ಜೆ. ದಿನಾಂಕ: 6.8.92ರ ಮಾರ್ಗ ಸೂಚಿ ಪ್ರಕಾರ ಬೆಳಗಾಂ ಅಭಿವೃದ್ಧಿ ಪ್ರಾಧಿಕಾರ ನೀಡುವ ಆಕ್ಷೇಪಣಾರಹಿತ ಪತ್ರ ಕೊಡಬೇಕೆಂದು ಒತ್ತಾಯಿಸಲಾಗುತ್ತಿದೆ. ಹಾಗೂ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯಿಂದ ಯಾವುದೇ ರೀತಿಯ ಕಿರುಕುಳವಿರುವುದಿಲ್ಲ.

ಇ) ಈ ವಿಷಯದ ಬಗ್ಗೆ ಸರ್ಕಾರವು ಮಾರ್ಗ ಸೂಚಿಯನ್ನು ಕೊಟ್ಟಿದೆ ಹಾಗೂ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯು ಇದರ ಬಗ್ಗೆ ಕಟ್ಟುನಿಟ್ಟಾಗಿ ಪಾಲನೆ ಮಾಡಲಾಗುತ್ತಿದೆ.

ಮೈಸೂರು ಜಿಲ್ಲೆ ಮತ್ತು ಕೊಡಗು ಜಿಲ್ಲೆಗೆ ಸಂಪರ್ಕ ಕಲ್ಪಿಸುವ ಸೇತುವೆ

371 (2061): ಶ್ರೀ ಎ.ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ):–

ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮೈಸೂರು ಜಿಲ್ಲೆ ಮತ್ತು ಕೊಡಗು ಜಿಲ್ಲೆಗೆ ಸಂಪರ್ಕ ಕಲ್ಪಿಸಲು ಅಂದಾಜು 125 ವರ್ಷಗಳ ಹಿಂದೆ ಕಾವೇರಿ ನದಿಗೆ ಕುಶಾಲನಗರ ಎಂಬಲ್ಲಿ ಒಂದು ಸೇತುವೆಯನ್ನು ನಿರ್ಮಿಸಲಾಗಿರುವುದು ನಿಜವೆ; ಆದರೆ ಈ ಸೇತುವೆಯು ತುಂಬಾ ಹಳೆಯದಾಗಿದ್ದು, ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಈ ಸೇತುವೆಯನ್ನು ಹೊಸದಾಗಿ ನಿರ್ಮಾಣ ಮಾಡುವ ಬಗ್ಗೆ ಸರ್ಕಾರವು ಕ್ರಮ ಕೈಗೊಂಡಿದೆಯೇ;

ಇ) ಹಾಗಿದ್ದಲ್ಲಿ ಯಾವಾಗ ನಿರ್ಮಿಸಲಾಗುವುದು ಹಾಗೂ ಅಂದಾಜು ವೆಚ್ಚವೆಷ್ಟು ?